# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 296 |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 15-02-2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ವಿವಿಧ ಇಲಾಖೆಗಳು, ಸರ್ಕಾರಿ ಸ್ವಾಯತ್ತ ನಿಗಮ ಮಂಡಳಿಗಳು, ವಿಶ್ವವಿದ್ಯಾಲಯಗಳು, ಸಹಕಾರಿ ಬ್ಯಾಂಕ್ ಮತ್ತು ನಿಗಮಗಳು ಮತ್ತು ಶಾಸನಬದ್ಧ ಸರ್ಕಾರಿ ಸಂಸ್ಥೆಗಳಲ್ಲಿ ಇಲ್ಲಿಯವರೆಗೆ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ವಿವಿಧ ಇಲಾಖೆ, ನಿಗಮ, ಮಂಡಳಿಗಳು, ವಿಶ್ವವಿದ್ಯಾಲಗಳು, ಸಹಕಾರಿ ಸಂಸ್ಥೆಗಳು ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 13 ಎಸ್ ಬಿಸಿ 2001, ದಿನಾಂಕ: 21.11.2001 ಮತ್ತು ದಿನಾಂಕ: 01.06.2002 ರನ್ವಯ 2001 ಮತ್ತು 2001 ನಂತರದಲ್ಲಿ ಪರಿಶಿಷ್ಟ ಜಾತಿಯ 16413 ಮತ್ತು ಪರಿಶಿಷ್ಟ ಪಂಗಡದ 4963 ಒಟ್ಟು 21376 ಹುದ್ದೆಗಳನ್ನು ಗುರುತಿಸಲಾಗಿತ್ತು. ಅವುಗಳಲ್ಲಿ ಇಲ್ಲಿಯವರೆಗೆ ಪರಿಶಿಷ್ಟ ಜಾತಿ –14932 ಮತ್ತು ಪರಿಶಿಷ್ಟ ಪಂಗಡ -4341 ಒಟ್ಟು 19273 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.<br><br>ಕೆಲವು ಸಂಸ್ಥೆಗಳು ಮುಚ್ಚಲ್ಪಟ್ಟ ಹಾಗೂ ಆರ್ಥಿಕ ಸಂಕಷ್ಟದ ಕಾರಣಗಳಿಂದ ಪರಿಶಿಷ್ಟ ಜಾತಿಯ-596, ಪರಿಶಿಷ್ಟ ಪಂಗಡದ-199 ಒಟ್ಟು 795 ಬ್ಯಾಕ್‌ಲಾಗ್ ಹುದ್ದೆಗಳಿಗೆ ಭರ್ತಿಯಿಂದ ವಿನಾಯಿತಿ ನೀಡುವಂತೆ ದಿನಾಂಕ: 21.06.2022ರ ಉಪ ಸಮಿತಿ ಸಭೆಯಲ್ಲಿ ಕೋರಲಾಗಿರುತ್ತದೆ.<br><br>ಆದರೆ, ವಿನಾಯಿತಿ ಕೋರಿರುವ ಇಲಾಖೆಗಳಿಂದ ಕಾರಣಗಳೊಂದಿಗೆ ವಿವರಗಳನ್ನು ನೀಡಬೇಕೆಂದು ದಿನಾಂಕ:12-10-2023ರ ಸಭೆಯಲ್ಲಿ ನಿರ್ಣಯಿಸಲಾಗಿದ್ದು, ಅದರಂತೆ ವಿವರಗಳನ್ನು ಪಡೆಯಲಾಗುತ್ತಿದೆ.<br><br>ಪ್ರಸ್ತುತ 18 ಇಲಾಖೆಗಳಲ್ಲಿ ಪರಿಶಿಷ್ಟ ಜಾತಿಯ 798 ಮತ್ತು ಪರಿಶಿಷ್ಟ ಪಂಗಡದ 441 ಒಟ್ಟು 1239 ಹುದ್ದೆಗಳು ಭರ್ತಿ ಮಾಡಲು ಬಾಕಿ ಇರುತ್ತದೆ. ವಿವರಗಳನ್ನು ಅನುಬಂಧ-1 ರಲ್ಲಿ ನೀಡಿದೆ. |

| | | |
|---|---|---|
| ಆ) | ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಕ್ರಮವೇನು; ಎಷ್ಟು ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಲಾಗಿದೆ; | ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಲಾಗಿದೆ. ಸದರಿ ಸಚಿವ ಸಂಪುಟ ಉಪಸಮಿತಿ ಸಭೆಯು ದಿನಾಂಕ: 21.06.2022, 16.11.2022 ಮತ್ತು 12.10.2023 ರಂದು ನಡೆದಿದ್ದು, ಸದರಿ ಸಭೆಯಲ್ಲಿ ವಿವಿಧ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಥಮ ಆದ್ಯತೆಯ ಮೇರೆಗೆ ಭರ್ತಿ ಮಾಡುವಂತೆ ನಿರ್ದೇಶನ ನೀಡಲಾಗಿದೆ.<br><br>ಸರ್ಕಾರದ ವತಿಯಿಂದ ಹಾಗೂ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ವತಿಯಿಂದ ದಿನಾಂಕ: 29.08.2023, 19.09.2023, 21.09.2023, 26.09.2023, 04.10.2023, 12.10.2023, 31.10.2023, 20.11.2023, 22.11.2023, 28.11.2023, 21.12.2023, 26.12.2023, 09.01.2024, 16.01.2024 ಮತ್ತು 30.01.2024ರಲ್ಲಿ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಿಗಳೊಂದಿಗೆ ಸಭೆ ನಡೆಸಿ ಬಾಕಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಥಮ ಆದ್ಯತೆಯ ಮೇರೆಗೆ ಕೂಡಲೇ ಭರ್ತಿ ಮಾಡುವಂತೆ ಸೂಚನೆ ನೀಡಿ ಬಾಕಿ ಇರುವ ಬ್ಯಾಕ್ ಲಾಗ್ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುತ್ತಿದೆ.<br><br>ಪ್ರಸ್ತುತ ಉನ್ನತ ಶಿಕ್ಷಣ ಇಲಾಖೆ, ಜಲಸಂಪನ್ಮೂಲ ಇಲಾಖೆ, ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ, ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ, ಅರಣ್ಯ ಇಲಾಖೆ ಹಾಗೂ ರೇಷ್ಮೆ ಇಲಾಖೆಗಳಲ್ಲಿ ಒಟ್ಟು 415 ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಲಾಗಿದೆ. |
| ಇ) | ಪ್ರಸ್ತುತ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕಾಲಮಿತಿಯಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಿದೆ; | |
| ಈ) | ಪ್ರಸ್ತುತ ಖಾಲಿ ಇರುವ ಬ್ಯಾಕ್ ಲಾಗ್ ಹುದ್ದೆಗಳಲ್ಲಿ ಇಲ್ಲಿಯವರೆಗೂ ಪ್ರತಿ ವರ್ಷ ಎಷ್ಟು ಖಾಲಿ ಹುದ್ದೆಗಳು ಸೃಷ್ಟಿಯಾಗುತ್ತಿವೆ ಮತ್ತು ಭರ್ತಿಯಾಗುತ್ತಿವೇ? (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ವಿವಿಧ ಇಲಾಖೆಗಳು/ ಮಂಡಳಿಗಳು/ ನಿಗಮಗಳು/ ಸಹಕಾರ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆಗಳನ್ನು ಕೈಗೊಂಡ ಅರ್ಹ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಮಾತ್ರ ಬ್ಯಾಕ್‌ಲಾಗ್ ಹುದ್ದೆಗಳೆಂದು ಪರಿಗಣಿಸಲಾಗುತ್ತದೆ ಮತ್ತು ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗಿರುತ್ತದೆ. |

**SWD/65/SLP/2024**

(**ಡಾ||ಹೆಚ್.ಸಿ.ಮಹದೇವಪ್ಪ**)
ಸಮಾಜ ಕಲ್ಯಾಣ ಸಚಿವರು.

[illegible] ಗುರುತಿಲ್ಲದ ಪ್ರಶ್ನೆ ಸಂಖ್ಯೆ: 296 ಕ್ಕೆ ಅನುಬಂಧ

ಅನುಬಂಧ-1

ಸರ್ಕಾರದ ವಿವಿಧ ಇಲಾಖೆಗಳು, ನಿಗಮಗಳು/ಮಂಡಳಿಗಳು/ವಿಶ್ವವಿದ್ಯಾಲಯಗಳು/ಸಹಕಾರ ಸಂಸ್ಥೆಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳ ವಿವರ

| ಕ್ರಮ ಸಂಖ್ಯೆ | ಇಲಾಖೆ/ನಿಗಮ/ ಮಂಡಳಿ/ವಿಶ್ವವಿದ್ಯಾಲಯ/ಸಹಕಾರ ಸಂಸ್ಥೆಗಳು ಇತ್ಯಾದಿ | ಭರ್ತಿ ಮಾಡಲು ಬಾಕಿ ಇರುವ ಹುದ್ದೆಗಳ ಸಂಖ್ಯೆ (2001 ರಲ್ಲಿ ಗುರುತಿಸಿರುವ ಹುದ್ದೆಗಳ ಸಂಖ್ಯೆ) | | | ಭರ್ತಿ ಮಾಡಲು ಬಾಕಿ ಇರುವ ಹುದ್ದೆಗಳ ಸಂಖ್ಯೆ (2001 ರ ನಂತರ ಗುರುತಿಸಿರುವ ಹುದ್ದೆಗಳ ಸಂಖ್ಯೆ) | | | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|---|---|---|---|
| | | ಪ.ಜಾ | ಪ.ಪಂ | ಒಟ್ಟು | ಪ.ಜಾ | ಪ.ಪಂ | ಒಟ್ಟು | |
| 1 | 2 | 3 | 4 | 5 | 6 | 7 | 8 | 9 |
| 1 | ಉನ್ನತ ಶಿಕ್ಷಣ ಇಲಾಖೆ | 192 | 219 | 411 | 77 | 71 | 148 | 559 |
| 2 | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ | 140 | 13 | 153 | 0 | 67 | 67 | 220 |
| 3 | ಲೋಕೋಪಯೋಗಿ ಮತ್ತು ಜಲಸಂಪನ್ಮೂಲ ಇಲಾಖೆ | 182 | 2 | 184 | 0 | 0 | 0 | 184 |
| 4 | ಸಾರಿಗೆ ಇಲಾಖೆ | 0 | 0 | 0 | 151 | 26 | 177 | 177 |
| 5 | ನಗರಾಭಿವೃದ್ಧಿ ಇಲಾಖೆ | 5 | 2 | 7 | 0 | 1 | 1 | 8 |
| 6 | ಸಹಕಾರ ಇಲಾಖೆ | 6 | 1 | 7 | 0 | 0 | 0 | 7 |
| 7 | ತೋಟಗಾರಿಕೆ ಇಲಾಖೆ | 0 | 0 | 0 | 5 | 1 | 6 | 6 |
| 8 | ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ | 10 | 1 | 11 | 0 | 0 | 0 | 11 |
| 9 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | 2 | 1 | 3 | 7 | 12 | 19 | 22 |
| 10 | ಅರಣ್ಯ ಇಲಾಖೆ | 0 | 0 | 0 | 0 | 1 | 1 | 1 |
| 11 | ವೈದ್ಯಕೀಯ ಶಿಕ್ಷಣ ಇಲಾಖೆ | 3 | 8 | 11 | 0 | 0 | 0 | 11 |
| 12 | ಕೃಷಿ ಇಲಾಖೆ | 8 | 8 | 16 | 0 | 0 | 0 | 16 |
| 13 | ಕನ್ನಡ ಮತ್ತು ಸಂಸ್ಕೃತಿ ಇಲಾಖೆ | 3 | 2 | 5 | 1 | 0 | 1 | 6 |
| 14 | ಒಳಾಡಳಿತ ಇಲಾಖೆ | 2 | 3 | 5 | 0 | 0 | 0 | 5 |
| 15 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ | 0 | 0 | 0 | 2 | 0 | 2 | 2 |
| 16 | ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ | 0 | 0 | 0 | 1 | 1 | 2 | 2 |
| 17 | ಕಂದಾಯ ಇಲಾಖೆ | 0 | 1 | 1 | 0 | 0 | 0 | 1 |
| 18 | ರೇಷ್ಮೆ ಇಲಾಖೆ | 0 | 0 | 0 | 1 | 0 | 1 | 1 |
| | ಒಟ್ಟು | 553 | 261 | 814 | 245 | 180 | 425 | 1239 |